# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಗದಗ

## ಎಸ್‌ಸಿ ನಂ. 05/2021

ಸಿಡಬ್ಲು: 2 / ಪಿಡಬ್ಲು: 5

ದಿನಾಂಕ: 16.07.2025

**ಸತ್ಯ ಪ್ರತಿಜ್ಞೆ ಮಾಡಿಸಲಾಯಿತು.**

| | | |
|---|---|---|
| ಸಾಕ್ಷಿದಾರರ ಹೆಸರು | : | ಹನಮಂತ ಮಾದರ |
| ತಂದೆ ಹೆಸರು | : | ಯಲ್ಲಪ್ಪ |
| ವಯಸ್ಸು | : | 37 ವರ್ಷ |
| ಉದ್ಯೋಗ | : | ಗೌಂಡಿ ಕೆಲಸ |
| ವಾಸ ಸ್ಥಳ | : | ಬೆನಕನಕೊಪ್ಪ ಗ್ರಾಮ |

## ಮುಖ್ಯ ವಿಚಾರಣೆ: ಸರ್ಕಾರಿ ಅಭಿಯೋಜಕರವರಿಂದ:

1. ನ್ಯಾಯಾಲಯದ ಮುಂದೆ ಇರುವ ಆರೋಪಿಯನ್ನು ಈ ಹಿಂದೆ ನಾನು ನೋಡಿರುವುದಿಲ್ಲ. ಈಗ ತೋರಿಸಿದ ದಾಖಲೆಯಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ಗುರುತಿಸಿದ್ದು, ಸದರಿ ದಾಖಲೆಯನ್ನು ಈಗಾಗಲೇ ನಿಪಿ-4 ಎಂದು ಗುರುತಿಸಲಾಗಿದ್ದು, **ಸಾಕ್ಷಿಯ ಸಹಿಯನ್ನು ನಿಪಿ-4(ಬಿ) ಎಂದು ಗುರುತಿಸಲಾಯಿತು.**

2. **ಈಗ ತೋರಿಸಿದ ದಾಖಲೆಯಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ಗುರುತಿಸಿದ್ದು, ಸದರಿ ದಾಖಲೆಯು ವೈದ್ಯಾಧಿಕಾರಿಗಳು FSL ಪರೀಕ್ಷೆಗೆ ಕಾಯ್ದಿರಿಸಿ ಪೂರೈಸಿದ ಅತ್ಯಾಚಾರಕ್ಕೊಳಗಾದ ಮಹಿಳೆಯ ಮೈಮೇಲಿನ ವಸ್ತುಗಳ ಜಪ್ತ ಪಂಚನಾಮೆಯಾಗಿದ್ದು, ಅದನ್ನು ನಿಪಿ-10 ಎಂದು, ಸಾಕ್ಷಿಯ ಸಹಿಯನ್ನು ನಿಪಿ-10(ಎ) ಎಂದು ಗುರುತಿಸಲಾಯಿತು.**

**3.** ಈಗ ತೋರಿಸಿದ ದಾಖಲೆಯಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ಗುರುತಿಸಿದ್ದು, ಸದರಿ ದಾಖಲೆಯನ್ನು ಈಗಾಗಲೇ ನಿಪಿ-5 ಎಂದು ಗುರುತಿಸಲಾಗಿದ್ದು, **ಸಾಕ್ಷಿಯ ಸಹಿಯನ್ನು ನಿಪಿ-5(ಸಿ) ಎಂದು ಗುರುತಿಸಲಾಯಿತು.**

4. ನಿಪಿ-4 ಕ್ಕೆ ನಾನು ಪೋಲೀಸ ಠಾಣೆಯಲ್ಲಿ ಪೋಲೀಸರ ಕೋರಿಕೆ ಮೇರೆಗೆ ಸಹಿ ಮಾಡಿದ್ದೇನೆ. ನಿಪಿ-4 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ.

5. ಪೋಲೀಸರು ನನ್ನನ್ನು ಒಂದು ಪ್ರದೇಶಕ್ಕೆ ಕರೆದುಕೊಂಡು ಹೋಗಿದ್ದರು. ನನ್ನ ಜೊತೆಗೆ

ಯಾರು ಯಾರು ಬಂದಿದ್ದರು ಎಂದು ನನಗೆ ಗೊತ್ತಿಲ್ಲ. ನಾನು ಸ್ಥಳಕ್ಕೆ ಹೋಗಿರಲಿಲ್ಲ. ನಾನು ದೂರದಲ್ಲಿ ನಿಂತುಕೊಂಡಿದ್ದೆನು. ಆ ಸ್ಥಳದಲ್ಲಿ ಏನಾಗಿತ್ತು ಎಂದು ನನಗೆ ಗೊತ್ತಿಲ್ಲ. ಸ್ಥಳದಲ್ಲಿ ನಿಪಿ-3 ರಂತೆ ಫೋಟೋ ತೆಗೆದಿರುತ್ತಾರೆ. ಅದರಲ್ಲಿ ತಾನು ಇದ್ದೇನೆ ಎಂದು ಹೇಳುತ್ತಾರೆ. ಸದರಿ ಫೋಟೋವನ್ನು ಯಾವ ಕಾರಣಕ್ಕೆ ತೆಗೆದರು ಎಂದು ನನಗೆ ಗೊತ್ತಿಲ್ಲ.

6. ಈಗ 4 – 5 ವರ್ಷಗಳ ಹಿಂದೆ, ನಿಪಿ-10 ಕ್ಕೆ ನಾನು ಪೋಲೀಸ ಠಾಣೆಯಲ್ಲಿ ಪೋಲೀಸರ ಕೋರಿಕೆ ಮೇರೆಗೆ ಸಹಿ ಮಾಡಿದ್ದೇನೆ. ನಿಪಿ-10 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಪೋಲೀಸರು ಜಪ್ತ ಮಾಡಿರುವುದಿಲ್ಲ. ಸ್ಥಳದಲ್ಲಿ ಫೋಟೋ ತೆಗೆದಿರುತ್ತಾರೆ. ಅದರಲ್ಲಿ ತಾನು ಇದ್ದೇನೆ ಎಂದು ಹೇಳುತ್ತಾರೆ. **ಸದರಿ ಫೋಟೋವನ್ನು ನಿಪಿ-11 ಎಂದು ಗುರುತಿಸಲಾಯಿತು.** ನಿಪಿ-11 ನ್ನು ಯಾವ ಕಾರಣಕ್ಕೆ ತೆಗೆದರು ಎಂದು ನನಗೆ ಗೊತ್ತಿಲ್ಲ.

7. ಈಗ 4 – 5 ವರ್ಷಗಳ ಹಿಂದೆ, ನಿಪಿ-5 ಕ್ಕೆ ನಾನು ಹುಬ್ಬಳ್ಳಿಯ ಸಿದ್ಧಾರೂಢಮಠದ ಹತ್ತಿರ ಪೋಲೀಸರ ಕೋರಿಕೆ ಮೇರೆಗೆ ಸಹಿ ಮಾಡಿದ್ದೇನೆ. ನಿಪಿ-5 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನನ್ನನ್ನು ಪೋಲೀಸರು ಮತ್ತೆ ಎಲ್ಲಿಗೂ ಕರೆದುಕೊಂಡು ಹೋಗಿರುವುದಿಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಮಾಡಿರುವುದಿಲ್ಲ. ಸ್ಥಳದಲ್ಲಿ ನಿಪಿ-6 ಮತ್ತು 7 ರಂತೆ ಫೋಟೋಗಳನ್ನು ತೆಗೆದಿರುತ್ತಾರೆ. ಅದರಲ್ಲಿ ತಾನು ಇದ್ದೇನೆ ಎಂದು ಹೇಳುತ್ತಾರೆ. ಸದರಿ ಫೋಟೋಗಳನ್ನು ಯಾವ ಕಾರಣಕ್ಕೆ ತೆಗೆದರು ಎಂದು ನನಗೆ ಗೊತ್ತಿಲ್ಲ. ಸದರಿ ಸ್ಥಳವನ್ನು ಯಾರು ತೋರಿಸಿದರು ಎಂದು ನನಗೆ ಗೊತ್ತಿಲ್ಲ. ನನಗೆ ಪ್ರಕರಣದ ಬಗ್ಗೆ ಗೊತ್ತಿಲ್ಲ.

**(ಈ ಹಂತದಲ್ಲಿ, ಸರ್ಕಾರಿ ಅಭಿಯೋಜಕರು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ, ಪಾಟಿ ಸವಾಲಿಗೆ ಅನುಮತಿ ಕೋರಿದ್ದರಿಂದ, ಅನುಮತಿಸಲಾಯಿತು.)**

**ಪಾಟಿ ಸವಾಲುಃ ಪಿಪಿಯವರಿಂದಃ**

8. ದಿನಾಂಕಃ 06.09.2020 ರಂದು ಮುಂಜಾನೆ 09. 15 ರಿಂದ 10.15 ರ ವರೆಗೆ ಫಾಸಾ-1 ರವರು ಹೇಳಿ ತೋರಿಸಿದ ಸ್ಥಳದಲ್ಲಿ ನಿಪಿ-4 ರಂತೆ ಪಂಚನಾಮೆಯನ್ನು ನನ್ನ ಸಮಕ್ಷಮ ಮಾಡಿರುತ್ತಾರೆ ಮತ್ತು ಆ ಸಮಯದಲ್ಲಿ ನಿಪಿ-3 ರಂತೆ ಫೋಟೋ ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಫೋಟೋ ತೆಗೆಯುವಾಗ ಮಾತ್ರ ಪೋಲೀಸರು ನನ್ನನ್ನು ಸ್ಥಳದಲ್ಲಿ ನಿಲ್ಲಿಸಿದ್ದರು ಎಂದು ಹೇಳುತ್ತಾರೆ. ಫಾಸಾ-1 ರವರು ಆರೋಪಿಯು ತನ್ನ ಮೇಲೆ ಅತ್ಯಾಚಾರ ಮಾಡಿದ ಸ್ಥಳದ ಎಂದು ನನ್ನ ಸಮಕ್ಷಮ ಸ್ಥಳ ತೋರಿಸಿರುತ್ತಾರೆ ಎಂದರೆ ಸರಿಯಲ್ಲ.

9. ದಿನಾಂಕಃ 06.09.2020 ರಂದು ಮುಂಜಾನೆ 08.00 ರಿಂದ 09.00 ರ ವರೆಗೆ ನನ್ನ



ಹಾಗೂ ಚಾಸಾ-3 ರವರ ಸಮಕ್ಷಮ ಚಾಸಾ-20 ರವರು ಹಾಜರಪಡಿಸಿದ ವಸ್ತುಗಳನ್ನು ಪೋಲೀಸರು ಪಂಚನಾಮೆ ಮೂಲಕ ಜಪ್ತ ಮಾಡಿಕೊಂಡಿರುತ್ತಾರೆ ಮತ್ತು ಆ ಸಮಯದಲ್ಲಿ ನಿಪಿ-11 ರಂತೆ ಫೋಟೋ ತೆಗೆದಿರುತ್ತಾರೆ ಎಂದರೆ ಸರಿಯಲ್ಲ.

10. ದಿನಾಂಕಃ 29.09.2020 ರಂದು ಮದ್ಯಾಹ್ನ 04.00 ರಿಂದ 05.00 ರ ಸಮಯದಲ್ಲಿ ನಿಪಿ-5 ರಂತೆ ಪಂಚನಾಮೆಯನ್ನು ನನ್ನ ಸಮಕ್ಷಮ ಮಾಡಿರುತ್ತಾರೆ ಮತ್ತು ಆ ಸಮಯದಲ್ಲಿ ನಿಪಿ-6 ಮತ್ತು 7 ರಂತೆ ಫೋಟೋಗಳನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಫ್ರಾಸಾ-1 ರವರು ಆರೋಪಿ ತನ್ನ ಮೇಲೆ ಅತ್ಯಾಚಾರ ಮಾಡಿದ ಸ್ಥಳ ಎಂದು ನನ್ನ ಸಮಕ್ಷಮ ಸ್ಥಳ ತೋರಿಸಿರುತ್ತಾರೆ ಎಂದರೆ ಸರಿಯಲ್ಲ. ಪೋಲೀಸರು ನನ್ನನ್ನು ಬೃಂದಾವನ ಹಾಗೂ ಹರಿಪ್ರಸಾದ ಲಾಡ್ಜಗಳಿಗೆ ಕರೆದುಕೊಂಡು ಹೋಗಿ, ಅಲ್ಲಿ ಫ್ರಾಸಾ-1 ರವರು ತೋರಿಸಿದ ಸ್ಥಳಗಳಲ್ಲಿ ಪಂಚನಾಮೆಗಳನ್ನು ನಿಪಿ-5 ರಂತೆ ಮಾಡಿರುತ್ತಾರೆ ಎಂದರೆ ಸರಿಯಲ್ಲ.

11. ನನ್ನ ಸಮಕ್ಷಮ ನಿಪಿ-4, 5 ಮತ್ತು 10 ರಂತೆ ಪಂಚನಾಮೆಗಳನ್ನು ಮಾಡಿ, ನಿಪಿ-3, 6, 7 ಮತ್ತು 11 ರಂತೆ ಫೋಟೋಗಳನ್ನು ತೆಗೆದಿದ್ದರೂ ಸಹ ಈಗ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

## <u>ಪಾಟಿ ಸವಾಲುಃ ಶ್ರೀ ಎಸ್.ಬಿ. ಘಟ್ಟಿರೆಡ್ಡಿಹಾಳ, ಆರೋಪಿ ಪರ ವಕೀಲರಿಂದಃ</u>

12. ಫೋಟೋವನ್ನು ಹೊರತುಪಡಿಸಿ, ನಿಪಿ-4, 5 ಮತ್ತು 10 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಸದರಿ ಫೋಟೋಗಳನ್ನು ಪೋಲೀಸರು ಯಾವ ಕಾರಣಕ್ಕೆ ತೆಗೆದರು ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಪೋಲೀಸರು ವಶಪಡಿಸಿಕೊಂಡಿಲ್ಲ.

## <u>ಮರು ವಿಚಾರಣೆ – ಇಲ್ಲ.</u>

**(ತೆರೆದ ನ್ಯಾಯಾಲಯದಲ್ಲಿ, ನನ್ನ ಉಕ್ತ ಲೇಖನದಂತೆ, ಸಾಕ್ಷಿಯ ಸಾಕ್ಷವನ್ನು ಬೆರಳಚ್ಚು ಮಾಡಿಸಲಾಯಿತು.)**

**ಓ ಹೇ ಕೇ ಸರಿ ಅದೆ.**

**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,**
**ಗದಗ**

# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಗದಗ

## ಎಸ್‌ಸಿ ನಂ. 05/2021

ಸಿಡಬ್ಲ್ಯೂ: 3 / ಪಿಡಬ್ಲ್ಯೂ: 6

ದಿನಾಂಕ: 16.07.2025

**ಸತ್ಯ ಪ್ರತಿಜ್ಞೆ ಮಾಡಿಸಲಾಯಿತು.**

| | | |
|---|---|---|
| ಸಾಕ್ಷಿದಾರರ ಹೆಸರು | : | ಶಿವಪ್ಪ ಮಾದರ |
| ತಾಯಿ ಹೆಸರು | : | ದೇವಕ್ಕ |
| ವಯಸ್ಸು | : | 36 ವರ್ಷ |
| ಉದ್ಯೋಗ | : | ಕೂಲಿ ಕೆಲಸ |
| ವಾಸ ಸ್ಥಳ | : | ಕುರುಗೋವಿನಕೊಪ್ಪ ಗ್ರಾಮ |

## ಮುಖ್ಯ ವಿಚಾರಣೆ: ಸರ್ಕಾರಿ ಅಭಿಯೋಜಕರವರಿಂದ:

1. ನ್ಯಾಯಾಲಯದ ಮುಂದೆ ಇರುವ ಆರೋಪಿಯನ್ನು ಈ ಹಿಂದೆ ನಾನು ನೋಡಿರುವುದಿಲ್ಲ. ಪ್ರಾಸಾ-1 ರವರು ನನಗೆ ಗೊತ್ತಿಲ್ಲ. ಪ್ರಾಸಾ-5 ರವರು ನನಗೆ ಗೊತ್ತು.

2. ಈಗ ತೋರಿಸಿದ ದಾಖಲೆಯಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ಗುರುತಿಸಿದ್ದು, ಸದರಿ ದಾಖಲೆಯನ್ನು ಈಗಾಗಲೇ ನಿಪಿ-4 ಎಂದು ಗುರುತಿಸಲಾಗಿದ್ದು, **ಸಾಕ್ಷಿಯ ಸಹಿಯನ್ನು ನಿಪಿ-4(ಸಿ) ಎಂದು ಗುರುತಿಸಲಾಯಿತು.**

3. ಈಗ 3 – 4 ವರ್ಷಗಳ ಹಿಂದೆ ನಾನು ನರಗುಂದದಲ್ಲಿ ಕೆಲಸಕ್ಕೆ ಹೋಗಿದ್ದಾಗ, ಪ್ರಾಸಾ-5 ರವರು ನನ್ನನ್ನು ನರಗುಂದ ಪೋಲೀಸ ಠಾಣೆಗೆ ಕೆಲಸ ನಿಮಿತ್ಯ ಕರೆದುಕೊಂಡು ಹೋಗಿದ್ದರು. ಆಗ ನಿಪಿ-4 ಕ್ಕೆ ನಾನು ಪೋಲೀಸ ಠಾಣೆಯಲ್ಲಿ ಪೋಲೀಸರ ಕೋರಿಕೆ ಮೇರೆಗೆ ಸಹಿ ಮಾಡಿದ್ದೇನೆ. ನಿಪಿ-4 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಮಾಡಿಲ್ಲ. ಪೋಲೀಸರು ನಮ್ಮನ್ನು ಎಲ್ಲಿಗೂ ಕರೆದುಕೊಂಡು ಹೋಗಿರುವುದಿಲ್ಲ. ಈಗ ತೋರಿಸಿದ ನಿಪಿ-3 ಫೋಟೋದಲ್ಲಿ ತಾನು ಇರುವುದಾಗಿ ಹೇಳುತ್ತಾರೆ. ನಿಪಿ-3 ನ್ನು ಠಾಣೆಯಲ್ಲಿ ತೆಗೆಯಲಾಗಿರುತ್ತದೆ. ನಿಪಿ-3 ನ್ನು ಯಾವ ಕಾರಣಕ್ಕೆ ತೆಗೆದರು ಎಂದು ನನಗೆ ಗೊತ್ತಿಲ್ಲ.

4. ಈಗ ತೋರಿಸಿದ ದಾಖಲೆಯಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ಗುರುತಿಸಿದ್ದು, ಸದರಿ ದಾಖಲೆಯನ್ನು ಈಗಾಗಲೇ ನಿಪಿ-10 ಎಂದು ಗುರುತಿಸಲಾಗಿದ್ದು, **ಸಾಕ್ಷಿಯ ಸಹಿಯನ್ನು ನಿಪಿ-10(ಬಿ)**

**ಎಂದು ಗುರುತಿಸಲಾಯಿತು.**

5. ಈಗ 3 – 4 ವರ್ಷಗಳ ಹಿಂದೆ ಪೋಲೀಸ ಠಾಣೆಯಲ್ಲಿ ನಿಪಿ-10 ಕ್ಕೆ ಪೋಲೀಸರ ಕೋರಿಕೆ ಮೇರೆಗೆ ಸಹಿ ಮಾಡಿದ್ದೇನೆ. ನಿಪಿ-10 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಮಾಡಿಲ್ಲ ಮತ್ತು ಯಾವುದೇ ವಸ್ತುಗಳನ್ನು ಜಪ್ತ ಮಾಡಿರುವುದಿಲ್ಲ. ಈಗ ತೋರಿಸಿದ ನಿಪಿ-11 ಫೋಟೋದಲ್ಲಿ ತಾನು ಇರುವುದಾಗಿ ಹೇಳುತ್ತಾರೆ. ನಿಪಿ-11 ನ್ನು ಯಾವ ಕಾರಣಕ್ಕೆ ತೆಗೆದರು ಎಂದು ನನಗೆ ಗೊತ್ತಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಗೊತ್ತಿಲ್ಲ.

**(ಈ ಹಂತದಲ್ಲಿ, ಸರ್ಕಾರಿ ಅಭಿಯೋಜಕರು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ, ಪಾಟಿ ಸವಾಲಿಗೆ ಅನುಮತಿ ಕೋರಿದ್ದರಿಂದ, ಅನುಮತಿಸಲಾಯಿತು.)**

**<u>ಪಾಟಿ ಸವಾಲುಃ ಪಿಪಿಯವರಿಂದಃ</u>**

6. ದಿನಾಂಕಃ 06.09.2020 ರಂದು ಮುಂಜಾನೆ 09. 15 ರಿಂದ 10.15 ರ ವರೆಗೆ ಫ್ರಾಸಾ-1 ರವರು ಹೇಳಿ ತೋರಿಸಿದ ಸ್ಥಳದಲ್ಲಿ ನಿಪಿ-4 ರಂತೆ ಪಂಚನಾಮೆಯನ್ನು ನನ್ನ ಸಮಕ್ಷಮ ಮಾಡಿರುತ್ತಾರೆ ಮತ್ತು ಆ ಸಮಯದಲ್ಲಿ ನಿಪಿ-3 ರಂತೆ ಫೋಟೋ ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಫೋಟೋ ತೆಗೆಯುವಾಗ ಮಾತ್ರ ಪೋಲೀಸರು ನನ್ನನ್ನು ಸ್ಥಳದಲ್ಲಿ ನಿಲ್ಲಿಸಿದ್ದರು ಎಂದು ಹೇಳುತ್ತಾರೆ. ಫ್ರಾಸಾ-1 ರವರು ಆರೋಪಿಯು ತನ್ನ ಮೇಲೆ ಅತ್ಯಾಚಾರ ಮಾಡಿದ ಸ್ಥಳದ ಎಂದು ನನ್ನ ಸಮಕ್ಷಮ ಸ್ಥಳ ತೋರಿಸಿರುತ್ತಾರೆ ಎಂದರೆ ಸರಿಯಲ್ಲ.

7. ದಿನಾಂಕಃ 06.09.2020 ರಂದು ಮುಂಜಾನೆ 08.00 ರಿಂದ 09.00 ರ ವರೆಗೆ ನನ್ನ ಹಾಗೂ ಚಾಸಾ-3 ರವರ ಸಮಕ್ಷಮ ಚಾಸಾ-20 ರವರು ಹಾಜರಪಡಿಸಿದ ವಸ್ತುಗಳನ್ನು ಪೋಲೀಸರು ನಿಪಿ-10 ಪಂಚನಾಮೆ ಮೂಲಕ ಜಪ್ತ ಮಾಡಿಕೊಂಡಿರುತ್ತಾರೆ ಮತ್ತು ಆ ಸಮಯದಲ್ಲಿ ನಿಪಿ-11 ರಂತೆ ಫೋಟೋ ತೆಗೆದಿರುತ್ತಾರೆ ಎಂದರೆ ಸರಿಯಲ್ಲ.

8. ನನ್ನ ಸಮಕ್ಷಮ ನಿಪಿ-4 ಮತ್ತು 10 ರಂತೆ ಪಂಚನಾಮೆಗಳನ್ನು ಮಾಡಿ, ವಸ್ತುಗಳನ್ನು ಜಪ್ತ ಮಾಡಿ, ನಿಪಿ-3 ಮತ್ತು 11 ರಂತೆ ಫೋಟೋಗಳನ್ನು ತೆಗೆದಿದ್ದರೂ ಸಹ ಈಗ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟಿ ಸವಾಲುಃ ಶ್ರೀ ಎಸ್.ಬಿ. ಘಟ್ಟಿರೆಡ್ಡಿಹಾಳ, ಆರೋಪಿ ಪರ ವಕೀಲರಿಂದಃ</u>**

9. ಪೋಲೀಸರು ಫೋಟೋವನ್ನು ಯಾವ ಕಾರಣಕ್ಕೆ ತೆಗೆದರು ಎಂದು ನನಗೆ ಗೊತ್ತಿಲ್ಲ. ನ್ನ

ಸಮಕ್ಷಮ ಯಾವುದೇ ವಸ್ತುಗಳನ್ನು ಪೋಲೀಸರು ವಶಪಡಿಸಿಕೊಂಡಿಲ್ಲ. ಪೋಲೀಸರು ನನ್ನನ್ನು ಯಾವುದೇ ಸ್ಥಳಕ್ಕೆ ಕರೆದುಕೊಂಡು ಹೋಗಿರುವುದಿಲ್ಲ. ನಿಪಿ-4 ಮತ್ತು 10 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನಾನು ಪೋಲೀಸರ ಕೋರಿಕೆ ಮೇರೆಗೆ ಮಾತ್ರ ಅವುಗಳಿಗೆ ಸಹಿ ಮಾಡಿದ್ದೇನೆ.

**ಮರು ವಿಚಾರಣೆ - ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ, ನನ್ನ ಉಕ್ತ ಲೇಖನದಂತೆ, ಸಾಕ್ಷಿಯ ಸಾಕ್ಷವನ್ನು ಬೆರಳಚ್ಚು ಮಾಡಿಸಲಾಯಿತು.)**

**ಓ ಹೇ ಕೇ ಸರಿ ಆದೆ.**

**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,**
**ಗದಗ**